SEPTEMBER 07, 2024

## ALL INDIA RADIO- DHARWAD
## PRADESH SAMACHARA (KANNADA) 7:05 AM

ಆತ್ಮೀಯ ಶ್ರೋತೃಗಳಿಗೆಲ್ಲ ಗೌರಿ–ಗಣೇಶ ಹಬ್ಬದ ಶುಭಾಶಯಗಳು

ಮುಖ್ಯಾಂಶಗಳು

- ರಾಜ್ಯದ ಮಹತ್ವಾಕಾಂಕ್ಷಿ ಎತ್ತಿನ ಹೊಳೆ ಯೋಜನೆಯಿಂದ 7 ಜಿಲ್ಲೆಗಳಿಗೆ ಕುಡಿಯುವ ನೀರು ಪೂರೈಕೆ – ಮುಖ್ಯಮಂತ್ರಿ ಸಿದ್ದರಾಮಯ್ಯ.
- 'ಸರ್ವರಿಗೂ ವಿಜ್ಞಾನ, ಸುಲಭ ವಿಜ್ಞಾನ, ಸುಸ್ಥಿರ ಅಭಿವೃದ್ಧಿಗೆ ವಿಜ್ಞಾನ' ಧ್ಯೇಯ ವಾಕ್ಯದಡಿ ರಾಜ್ಯಾದ್ಯಂತ ವಿಜ್ಞಾನ ಕೇಂದ್ರ ನಿರ್ಮಿಸುವ ಗುರಿ – ಸಚಿವ ಎನ್.ಎಸ್.ಬೋಸರಾಜು.
- ಆತ್ಮ ಸಂಸ್ಕಾರದ ಶಿಕ್ಷಣ ನೀಡುವಂತೆ ಸಚಿವ ಸಂತೋಷ ಲಾಡ್ ಶಿಕ್ಷಕರಿಗೆ ಕರೆ.
- ಇಂದು ನಾಡಿನಾದ್ಯಂತ ಸಡಗರ –ಸಂಭ್ರಮದ ಗೌರಿ–ಗಣೇಶ ಹಬ್ಬ ಆಚರಣೆ; ಗಣ್ಯರಿಂದ ಶುಭಾಶಯ.

ಈಗ ವಾರ್ತೆಗಳ ವಿವರ

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಎತ್ತಿನ ಹೊಳೆ ಯೋಜನೆಯನ್ನು 2027 ರ ಅಂತ್ಯದೊಳಗಾಗಿ ಪೂರ್ಣಗೊಳಿಸಿ ಒಟ್ಟು 7 ಜಿಲ್ಲೆಗಳಿಗೆ ನೀರು ಪೂರೈಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಹಾಸನ ಜಿಲ್ಲೆಯ ಸಕಲೇಶಪುರ ತಾಲೂಕಿನ ಹಾಗೂ ಹೆಬ್ಬನಹಳ್ಳಿ ಬಳಿ ಯೋಜನೆಯ ಮೊದಲ ಹಂತದ ಕಾಮಗಾರಿಗಳ ಉದ್ಘಾಟನಾ ಸಮಾರಂಭದಲ್ಲಿ ತುಂಬಿ ಹರಿಯುತ್ತಿರುವ ಎತ್ತಿನಹೊಳೆ ಯೋಜನೆ ಕಾಲುವೆಗೆ ಬಾಗಿನ ಅರ್ಪಿಸಿ ಬಳಿಕ ಅವರು ಮಾತನಾಡಿದರು.

ಧ್ವನಿ– ಮುಖ್ಯಮಂತ್ರಿ (35 ಸೆಕೆಂದುಗಳು)

*******

ಯುವಜನರಲ್ಲಿ ವಿಜ್ಞಾನಾಸಕ್ತಿಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಎನ್.ಎಸ್.ಬೋಸರಾಜು ಹೇಳಿದ್ದಾರೆ. ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ಶ್ರೀ ಆದಿಚುಂಚನಗಿರಿ ಕ್ಷೇತ್ರದ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರಕ್ಕೆ ನಿನ್ನೆ ಭೇಟಿ ನೀಡಿ, ಕಾಮಗಾರಿ ಪ್ರಗತಿ ಪರಿಶೀಲಿಸಿದ ಬಳಿಕ ಶೀಘ್ರವಾಗಿ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಸುಮಾರು 7 ಕೋಟಿ ರೂಪಾಯಿ ವೆಚ್ಚದಲ್ಲಿ ವಿಜ್ಞಾನ ಕೇಂದ್ರ ನಿರ್ಮಾಣಗೊಳ್ಳುತ್ತಿದೆ. 'ಸರ್ವರಿಗೂ ವಿಜ್ಞಾನ, ಸುಲಭ ವಿಜ್ಞಾನ, ಸುಸ್ಥಿರ ಅಭಿವೃದ್ಧಿಗೆ ವಿಜ್ಞಾನ' ಎಂಬ ಧ್ಯೇಯ ವಾಕ್ಯದಡಿ ರಾಜ್ಯ ಸರ್ಕಾರ ಎಲ್ಲ ಜಿಲ್ಲೆಗಳಲ್ಲೂ ಇಂತಹ ವಿಜ್ಞಾನ ಕೇಂದ್ರವನ್ನು ನಿರ್ಮಿಸುವ ಗುರಿ ಹೊಂದಿದೆ ಎಂದರು.

*******

ಇಂದಿನ ಶೈಕ್ಷಣಿಕ ಪ್ರಗತಿ ಹಾಗೂ ಗುಣಮಟ್ಟ ಪರಿಶೀಲಿಸಿದಾಗ, ಇಡೀ ಶಿಕ್ಷಕ ಸಮೂಹ ತಮ್ಮ ಆದರ್ಶತನ ಮತ್ತು ಕಾಯಕ ವೃತ್ತಿ ಮೌಲ್ಯಗಳ ಕುರಿತು ಆತ್ಮಾವಲೋಕನ ಮಾಡಿಕೊಳ್ಳುವ ಕಾಲ ಘಟ್ಟದಲ್ಲಿದೆ.

ಪೂಜ್ಯನೀಯ ಗುರು ಸ್ಥಾನದಲ್ಲಿರುವ ಶಿಕ್ಷಕರು ಬಸವಣ್ಣ, ಅಂಬೇಡ್ಕರ, ರಾಧಾಕೃಷ್ಣನ್ ಅವರು ಹೇಳಿದ ನೀತಿ ಮಾರ್ಗದಲ್ಲಿ ನಡೆದು, ಆತ್ಮ ಸಂಸ್ಕಾರ ನೀಡುವ ಶಿಕ್ಷಣ ನೀಡುವಂತೆ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಎಸ್.ಲಾಡ್ ಹೇಳಿದ್ದಾರೆ. ಧಾರವಾಡದಲ್ಲಿ ನಿನ್ನೆ ಆಯೋಜಿಸಿದ್ದ ಶಿಕ್ಷಕರ ದಿನ ಹಾಗೂ ಉತ್ತಮ ಶಿಕ್ಷಕರಿಗೆ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ, ಮಾತನಾಡಿದ ಅವರು, ನಮ್ಮ ಶಿಕ್ಷಕ ಸಮೂಹಕ್ಕೆ ಡಾಕ್ಟರ್ ರಾಧಾಕೃಷ್ಣನ್ ಅವರದು ಮಾದರಿ ವ್ಯಕ್ತಿತ್ವ. ಶಿಕ್ಷಣ ಮತ್ತು ಸಂವಿಧಾನಕ್ಕೆ ಅವರ ಕೊಡುಗೆ ಅಪಾರವಾಗಿದೆ. ಉತ್ತಮ ಸಮಾಜ ನಿರ್ಮಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ ಎಂದರು.

*******

ಚನ್ನಮ್ಮನ ವಿಜಯೋತ್ಸವದ 200 ವ ᐟಗಳು ಪೂರ್ಣಗೊಂಡ ಹಿನ್ನಲೆಯಲ್ಲಿ ಪ್ರಸಕ್ತ ಸಾಲಿನ ಚನ್ನಮ್ಮ ಉತ್ಸವನ್ನು ವಿಜೃಂಭಣೆಯಿಂದ ಆಚರಿಸಲು ಸಿದ್ಧತೆಗಳನ್ನು ಮಾಡಿಕೊಳ್ಳಲು ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬೆಳಗಾವಿಯಲ್ಲಿ ನಿನ್ನೆ ಜರುಗಿದ ಚನ್ನಮ್ಮ ಕಿತ್ತೂರು ಉತ್ಸವ–2024ರ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಉತ್ಸವದ ಅಂಗವಾಗಿ ಆಯೋಜಿಸಲಾಗುವ ಕ್ರೀಡಾಕೂಟಗಳಲ್ಲಿ ಗ್ರಾಮೀಣ ಕ್ರೀಡೆಗಳಿಗೆ ಹೆಚ್ಚಿನ ಒತ್ತು ನೀಡಬೇಕು. ಮೂರು ದಿನಗಳ ಕಾಲ ಜರುಗಲಿರುವ ಚನ್ನಮ್ಮನ ಕಿತ್ತೂರ ಉತ್ಸವದ ಕಾರ್ಯಕ್ರಮದ ಪ್ರಯುಕ್ತ ವಿಚಾರ ಗೋಷ್ಠಿಗಳ ಆಯೋಜನೆಗೆ ಕ್ರಮ ವಹಿಸಬೇಕು ಹಾಗೂ ವೇದಿಕೆಗಳಿಗೆ ಸ್ವಾತಂತ್ರ್ಯ ಹೋರಾಟಗಾರರ ಹೆಸರಿಡಲು ಮತ್ತು ಆಮಂತ್ರಣ ಪತ್ರಿಕೆಯಲ್ಲಿ ಹೋರಾಟದಲ್ಲಿ ಪಾಲ್ಗೊಂಡ ವಂಶಜರ ಹೆಸರುಗಳನ್ನು ನಮೂದಿಸಲು ತಿಳಿಸಿದರು.

*******

ಕೆ.ಎಂ.ಸಿ. ಸಂಸ್ಥೆಯು ಜನರಿಗೆ ಉತ್ತಮ ಆರೋಗ್ಯ ಸೇವೆಯನ್ನು ನೀಡುತ್ತಿದೆ. ಈ ಸಂಸ್ಥೆಯು ಉತ್ತರ ಕರ್ನಾಟಕದ ಕಾಮಧೇನು, ಕಲ್ಪವೃಕ್ಷವಾಗಿದೆ ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವ ಡಾಕ್ಟರ್ ಶರಣಪ್ರಕಾಶ ಪಾಟೀಲ ಹೇಳಿದ್ದಾರೆ. ಹುಬ್ಬಳ್ಳಿಯ ಕೆ.ಎಂ.ಸಿ.ಆರ್.ಐ. ಸಭಾಂಗಣದಲ್ಲಿ ಕೆ.ಎಂ.ಸಿ.ಸಂಸ್ಥಾಪನಾ ದಿನಾಚರಣೆ ಹಾಗೂ ಕೆ.ಎಂ.ಸಿ.ಆರ್.ಐ ಮರುನಾಮಕರಣ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯದ ಪ್ರತಿಭಾವಂತ ಹಾಗೂ ಗ್ರಾಮೀಣ ಭಾಗದ ಯುವಕರಿಗೆ ವೈದ್ಯಕೀಯ ಅಧ್ಯಯನ ನಡೆಸಲು ಅವಕಾಶ ಕಲ್ಪಿಸಬೇಕಾಗಿದೆ. ಸರ್ಕಾರಿ ಸೂಪರ್ ಸ್ಪೆ ಾಲಿಟಿ ಆಸ್ಪತ್ರೆ ತೆರೆಯಲಾಗುವುದು ಎಂದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.

*******

ಭಾದ್ರಪದ ಮಾಸದ ಶುಕ್ಲಪಕ್ಷದ ಚೌತಿಯ ದಿನವಾದ ಇಂದು ನಾಡಿನೆಲ್ಲೆಡೆ ಗಣೇಶ ಚತುರ್ಥಿ ಹಬ್ಬವನ್ನು ಶ್ರದ್ಧಾ–ಭಕ್ತಿಯಿಂದ ಆಚರಿಸಲಾಗುತ್ತಿದೆ. ಗಣಪತಿಯ ಮೂರ್ತಿಯನ್ನು ಪೂಜಿಸಿ, ಮೋದಕ, ಕಡುಬುಗಳಂತಹ ಸಿಹಿ ತಿಂಡಿಯನ್ನು ಮಾಡಿ ಗಣೇಶನಿಗೆ ನೈವೇದ್ಯ ಮಾಡಲಾಗುತ್ತದೆ. ಗಣೇಶ ಹಬ್ಬಕ್ಕೆಂದು ಹೂ, ಹಣ್ಣು, ಬಾಳೆಕಂದು, ಗಣೇಶ ವಿಗ್ರಹಗಳ ಹಾಗೂ ಅಗತ್ಯ ವಸ್ತುಗಳ ದುಬಾರಿ ಬೆಲೆಗಳ ನಡುವೆಯೂ ಮಾರುಕಟ್ಟೆಯಲ್ಲಿ ಖರೀದಿ ಭರಾಟೆ ನಡೆಯುತ್ತಿದೆ. ನಾಡಿನ ಜನತೆಗೆ ಗೌರಿ–ಗಣೇಶ ಹಬ್ಬ ಸುಖ, ಶಾಂತಿ, ಸಮೃದ್ಧಿ, ನೆಮ್ಮದಿ ತರಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸೇರಿದಂತೆ ಅನೇಕ, ಸಚಿವರು, ಗಣ್ಯರು ಶುಭ ಹಾರೈಸಿದ್ದಾರೆ.

ದೊಡ್ಡಬಳ್ಳಾಪುರದ ನಗರಸಭೆಯಿಂದ ಪರಿಸರಸ್ನೇಹಿಯಾಗಿ ಗಣೇಶೋತ್ಸವ ಆಚರಿಸುವಂತೆ ಪ್ರಚಾರ ಕೈಗೊಳ್ಳಲಾಯಿತು. ಗಣೇಶ ಮೂರ್ತಿಗಳ ವಿಸರ್ಜನೆಗೆ ಹೊಂಡ ನಿರ್ಮಿಸಿ, ಸೂಕ್ತ ವ್ಯವಸ್ಥೆ ಕಲ್ಪಿಸಲಾಗಿದೆ. ಬೆಂಗಳೂರು ನಗರದ ದಕ್ಷಿಣ ವಲಯ ಪದ್ಮನಾಭ ನಗರ ವ್ಯಾಪ್ತಿಯಲ್ಲಿ ಬರುವ ಯಡಿಯೂರು ಕೆರೆ ವಿಸರ್ಜನಾ ಕೊಳಕ್ಕೆ ನೀರು ತುಂಬಿಸುವ ಕಾರ್ಯಕ್ಕೆ ನಿನ್ನೆ ಚಾಲನೆ ನೀಡಲಾಯಿತು. ಈ ಬಾರಿ ಇಂದಿನಿಂದ 11 ದಿನಗಳ ಅವಧಿಯವರೆಗೆ ಮಾತ್ರ ಗಣೇಶ ಮೂರ್ತಿಗಳ ವಿಸರ್ಜನೆಗೆ ಅವಕಾಶ ಕಲ್ಪಿಸಲಾಗಿದೆ. ಮೊದಲ 3 ದಿನಗಳ ಕಾಲ ಹೆಚ್ಚು ವಿಸರ್ಜನೆಯಾಗಲಿದ್ದು, ವಿಸರ್ಜನಾ ಕೊಳ ಬಹುತೇಕ ಭರ್ತಿಯಾಗಲಿದೆ. ಈ ಹಿನ್ನೆಲೆ, ದಿನಾಂಕ 10 ರಂದು ಶುಚಿತ್ವ ಕಾರ್ಯದ ನಿಮಿತ್ತ, ಗಣೇಶ ಮೂರ್ತಿಗಳ ವಿಸರ್ಜನೆಗೆ ಅವಕಾಶ ಇರುವುದಿಲ್ಲ.

11 ರಿಂದ 17ನೇ ತಾರೀಖಿನವರೆಗೆ ಮಾತ್ರ ಗಣೇಶ ಮೂರ್ತಿಗಳ ವಿಸರ್ಜನೆ ಮಾಡಲು ಅಗತ್ಯ ಸೌಲಭ್ಯಗಳ ವ್ಯವಸ್ಥೆಗೆ ಪಾಲಿಕೆ ಕ್ರಮ ಕೈಗೊಂಡಿರುತ್ತದೆ ಎಂದು ಪದ್ಮನಾಭ ನಗರ ವಿಭಾಗದ ಕಾರ್ಯಪಾಲಕ ಅಭಿಯಂತರರು ತಿಳಿಸಿದ್ದಾರೆ. ಯಡಿಯೂರು ಕೆರೆ ವಿಸರ್ಜನಾ ಕೊಳದಲ್ಲಿ ಮಣ್ಣಿನಿಂದ ತಯಾರಿಸಿದ ಗಣೇಶ ಮೂರ್ತಿಗಳನ್ನು ಮಾತ್ರ ವಿಸರ್ಜನೆ ಮಾಡಲು ಅವಕಾಶ ನೀಡಲಾಗುವುದು.

*******

ಧಾರವಾಡದ ಶ್ರೀ ನಂದಿಕೋಲ ಬಸವಣ್ಣ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿದ್ದ ಪರಿಸರ ಸ್ನೇಹಿ ಗಣೇಶ ಮೂರ್ತಿ ನಿರ್ಮಾಣ ಕಾರ್ಯಾಗಾರದಲ್ಲಿ, ವಿವಿಧ ಶಾಲಾ ಮಕ್ಕಳಿಗೆ ಮೂರ್ತಿ ಮಾಡುವ ತರಬೇತಿ ನೀಡಿದ ಕಲಾವಿದ ಮಂಜುನಾಥ ಹಿರೇಮಠ ತರಬೇತಿಯ ಮಹತ್ವದ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ- ಮಂಜುನಾಥ ಹಿರೇಮಠ ( 45 ಸೆಕೆಂದುಗಳು)

*******

ನೈಸರ್ಗಿಕವಾಗಿ ತಯಾರಿಸಿದ ಮಣ್ಣಿನ ಗಣೇಶನ ವಿಗ್ರಹಗಳನ್ನು ಮಾತ್ರ ಬಳಸುವ ಮೂಲಕ ಕೆರೆ, ನದಿ ಮೂಲಗಳು ಕಲುಷಿತಗೊಳಿಸದಂತೆ ಕಾಪಾಡುವುದು ನಮ್ಮ ಕರ್ತವ್ಯ ಎಂದು ಸಣ್ಣ ನೀರಾವರಿ ಖಾತೆ ಸಚಿವ ಎನ್.ಎಸ್.ಬೋಸರಾಜು ಹೇಳಿದ್ದಾರೆ. ಗಣೇಶೋತ್ಸವಕ್ಕೆ ಬಳಸಿದ ಎಲ್ಲ ವಸ್ತುಗಳನ್ನು ವಿಸರ್ಜನೆ ವೇಳೆ ಕೆರೆ ಅಥವಾ ನದಿಗೆ ಹಾಕದೆ ಸಮರ್ಪಕವಾಗಿ ವಿಲೇವಾರಿ ಮಾಡೋಣ; ಜೀವಜಲದ ಮೂಲ ನಾಶವಾದರೆ ನಮಗೆ ಬದುಕುಳಿಯಲು ಸಾಧ್ಯವಿಲ್ಲ. ಅದನ್ನು ಮನಗಂಡು ಪರಿಸರ ಸ್ನೇಹಿ ಹಬ್ಬಗಳ ಆಚರಣೆಗೆ ಮಹತ್ವ ನೀಡೋಣ ಎಂದು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಕೋರಿದ್ದಾರೆ.

*******

ಅಧಿಕಾರ ವಿಕೇಂದ್ರೀಕರಣ ವ್ಯವಸ್ಥೆ ಜಾರಿಗೊಳಿಸುವ ಮೂಲಕ ಮಹಾತ್ಮ ಗಾಂಧೀಜಿ ಅವರ  ಗ್ರಾಮ ಸ್ವರಾಜ್ ಕನಸು ನನಸಾಗಿಸಲು ಸಾಧ್ಯವಿದೆ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ ಪಾಟೀಲ್ ತಿಳಿಸಿದ್ದಾರೆ. ಗದಗ ನಗರದ ಜಿಲ್ಲಾಡಳಿತ ಭವನದಲ್ಲಿ ವಿಕೇಂದ್ರೀಕರಣ ವ್ಯವಸ್ಥೆಯಲ್ಲಿ ಯೋಜನೆಗಳ ತಯಾರಿಕೆ ಪ್ರಕ್ರಿಯೆಯನ್ನು ಬಲವರ್ಧನೆಗೊಳಿಸುವ ಕಾರ್ಯಗಾರ ಉದ್ಘಾಟಿಸಿ ಮಾತನಾಡಿದ ಅವರು, ಚುನಾಯಿತ ಪ್ರತಿನಿಧಿಗಳು ಆಸಕ್ತಿ ಮತ್ತು ಶ್ರದ್ಧೆಯಿಂದ ತಮ್ಮನ್ನು ಗ್ರಾಮದ ಅಭಿವೃದ್ಧಿ ಕೆಲಸದಲ್ಲಿ ತೊಡಗಿಸಿಕೊಂಡು ಕಾನೂನಿನಲ್ಲಿ ಕಲ್ಪಿಸಿರುವ ಅಧಿಕಾರವನ್ನು ಬಳಸಿ, ಜನತೆಯ ಒಳಿತಿಗೆ ಶ್ರಮಿಸಬೇಕು ಎಂದರು.

*******

ಈಗ ಸಂಕ್ಷಿಪ್ತ ಸುದ್ದಿಗಳು

ರಾಯಚೂರು  ಜಿಲ್ಲೆಯ ಮಾನ್ವಿ ತಾಲೂಕಿನ ಕಪಗಲ್‌ನ ಗ್ರಾಮದ ಬಳಿ ನಡೆದ ಅಪಘಾತದ ಹಿನ್ನಲೆ, ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾಕ್ಟರ್ ಶರಣ್ ಪ್ರಕಾಶ್ ಪಾಟೀಲ್ ನಗರದ ರಿಮ್ಸ್ ಹಾಗೂ ಸುರಕ್ಷಾ ಆಸ್ಪತ್ರೆಗೆ ಭೇಟಿ ನೀಡಿ, ಮಕ್ಕಳ ಆರೋಗ್ಯ ವಿಚಾರಿಸಿದರು.

*******

ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಪಿ.ಎಂ. ನರೇಂದ್ರಸ್ವಾಮಿ ನೇತೃತ್ವದ 19 ಜನ ಸದಸ್ಯರನ್ನು ಒಳಗೊಂಡ ಸಮಿತಿಯು ಇದೇ ತಿಂಗಳ 19 ರಿಂದ 3 ದಿನಗಳ ಕಾಲ  ಕಲಬುರಗಿ ವಿಭಾಗದ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳಲಿದೆ ಎಂದು ಕರ್ನಾಟಕ ವಿಧಾನಸಭೆ ಸಚಿವಾಲಯದ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ತಿಳಿಸಿದ್ದಾರೆ.

*******